ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: DTE-EXAM0ECS3/29/2025

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 11/07/2005

**<u>ಸುತ್ತೋಲೆ</u>**

ವಿಷಯ: ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಡಿ ಜುಲೈ-2025 ರ ಅಖಿಲ ಭಾರತ ವೃತ್ತಿಪರೀಕ್ಷೆಗೆ ಪ್ರಾಯೋಗಿಕ ಪರೀಕ್ಷಕರನ್ನು ನಿಯೋಜಿಸುವ ಬಗ್ಗೆ.
ಉಲ್ಲೇಖ: ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ,ಇವರ ಪತ್ರ ಸಂಖ್ಯೆ:ಕೈತಉ/ತರಬೇತಿ/ವೃಪವಿ/ಕುತಯೋ-1/ವಿವ-07/2025-26 ದಿನಾಂಕ:10/07/2025.

-----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಪತ್ರದಲ್ಲಿ ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು ಇವರು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಡಿ ಜುಲೈ-2025 ರ ಅಖಿಲ ಭಾರತ ವೃತ್ತಿ ಪರೀಕ್ಷೆಯು ಡಿ ಜಿ ಟಿ ನವದೆಹಲಿರವರು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುವಂತೆ ದಿನಾಂಕ 17/07/2025 ರಿಂದ ಪ್ರಾರಂಭವಾಗುತ್ತಿದ್ದು, ಪರೀಕ್ಷೆಯು ರಾಜ್ಯದ ಸುಮಾರು 222 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದ್ದು, ಸದರಿ ಪರೀಕ್ಷೆಗೆ ವಿವಿಧ ವೃತ್ತಿಗಳಿಂದ ಸುಮಾರು 1.1 ಲಕ್ಷಕ್ಕಿಂತಲೂ ಹೆಚ್ಚಿನ ತರಬೇತಿದಾರರು ಹಾಜರಾಗುತ್ತಿದ್ದು, ಹೆಚ್ಚಿನ ಸಂಖ್ಯೆಯ ಪ್ರಾಯೋಗಿಕ ಪರೀಕ್ಷಕರ ಅವಶ್ಯಕತೆ ಇರುತ್ತದೆ. ಆದರೆ ನಮ್ಮ ಇಲಾಖೆಯಲ್ಲಿ ಕಿರಿಯ ತರಬೇತಿ ಅಧಿಕಾರಿಗಳ ಕೊರತೆ ಇದ್ದು ಲಭ್ಯವಿರುವ ಅರ್ಹ ಕಿರಿಯ ತರಬೇತಿ ಅಧಿಕಾರಿಗಳಿಂದ ಪ್ರಾಯೋಗಿಕ ಪರೀಕ್ಷೆಗಳನ್ನು ಪೂರ್ಣಗೊಳಿಸುವುದು ಕಷ್ಟಸಾಧ್ಯವಾಗಿರುತ್ತದೆ. ಆದ ಕಾರಣ ತಾಂತ್ರಿಕ ಶಿಕ್ಷಣ ಇಲಾಖೆಯಡಿ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕನಿಷ್ಠ 3 ವರ್ಷಗಳ ಬೋಧನಾ ಅನುಭವವಿರುವ ಉಪನ್ಯಾಸಕರನ್ನು, ಈ ಇಲಾಖೆಯಡಿ ನಡೆಸಲಾಗುತ್ತಿರುವ ಜುಲೈ-2025 ರ ಅಖಿಲ ಭಾರತ ವೃತ್ತಿ ಪರೀಕ್ಷೆಗೆ ಪ್ರಾಯೋಗಿಕ ಪರೀಕ್ಷಕರನ್ನಾಗಿ ಕಾರ್ಯನಿರ್ವಹಿಸಲು ಅನುವಾಗುವಂತೆ ನೇಮಿಸಿ ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲ್ಕಂಡ ಹಿನ್ನೆಲೆಯಲ್ಲಿ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಪ್ರತಿ ಜಿಲ್ಲೆಯ ನೋಡಲ್ ಅಧಿಕಾರಿಗಳು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳನ್ನು ದಿನಾಂಕ:17/07/2025 ರಿಂದ ಪ್ರಾರಂಭವಾಗುತ್ತಿರುವ ಅಖಿಲ ಭಾರತ ವೃತ್ತಿ ಪರೀಕ್ಷೆಗಳನ್ನು ನಡೆಸುವ ಸಂಬಂಧ ಪ್ರಾಯೋಗಿಕ ಪರೀಕ್ಷಕರುಗಳನ್ನು ನಿಯೋಜಿಸಲು ಸಂಪರ್ಕಿಸುವರು.

ಪ್ರಯುಕ್ತ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಪ್ರತಿ ಜಿಲ್ಲೆಯ ನೋಡಲ್ ಅಧಿಕಾರಿಗಳು ಹತ್ತಿರದ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳನ್ನು ಸಂಪರ್ಕಿಸಿದಾಗ ಪ್ರಸ್ತುತ ತಾಂತ್ರಿಕ ಪರೀಕ್ಷಾ ಮಂಡಳಿಯಲ್ಲಿ ಜುಲೈ 2025ರ Makeup ಥಿಯರಿ ಪರೀಕ್ಷೆಗಳು ದಿನಾಂಕ:14.07.2025 ರಿಂದ 25.07.2025 ವರೆಗೆ ನಿಗದಿಯಾಗಿರುವುದರಿಂದ ಸದರಿ ಪರೀಕ್ಷೆಗೆ ಯಾವುದೇ ತೊಂದರೆಯಾಗದಂತೆ ಅಖಿಲ ಭಾರತ ವೃತ್ತಿ ಪರೀಕ್ಷೆಗಳಿಗೆ ಅರ್ಹ ಪ್ರಾಯೋಗಿಕ ಪರೀಕ್ಷಕರುಗಳನ್ನು ಪರೀಕ್ಷಾ ಗೌಪ್ಯತೆ ಮತ್ತು ಪಾವಿತ್ರ್ಯತೆ ಕಾಪಾಡುವಂತೆ ಸೂಚಿಸಿ

ಬಿಡುಗಡೆಗೊಳಿಸಿ ಸದರಿ ಪರೀಕ್ಷೆಗಳನ್ನು ನಡೆಸಲು ಅಗತ್ಯ ಸಹಕಾರ ನೀಡುವಂತೆ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಪ್ರಾಯೋಗಿಕ ಪರೀಕ್ಷಕರಾಗಿ ಕಾರ್ಯ ನಿರ್ವಹಿಸಿದ ಉಪನ್ಯಾಸಕರು ಸರ್ಕಾರದ ಆದೇಶದನುಸಾರ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ ಸಂಭಾವನೆ ಪಡೆಯಲು ಅರ್ಹರಿರುತ್ತಾರೆ.

Digitally signed by MANJUSHREE N
Date: 16-07-2025 14:33:46

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು

ಇವರಿಗೆ:

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಅಗತ್ಯ ಕ್ರಮಕ್ಕಾಗಿ.

ಪ್ರತಿ:

1. ಮಾನ್ಯ ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು – ಆಪ್ತ ಶಾಖೆಗೆ ಮಾಹಿತಿಗಾಗಿ
2. ಮಾನ್ಯ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು – ಆಪ್ತ ಶಾಖೆಗೆ ಮಾಹಿತಿಗಾಗಿ
3. ಮಾನ್ಯ ನಿರ್ದೇಶಕರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು - ಮಾಹಿತಿಗಾಗಿ
4. ಕಾರ್ಯದರ್ಶಿ, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು – ಮಾಹಿತಿಗಾಗಿ
5. ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು